Akashvani : Bangalore
National Bulletin In Kannada
25.01.2025 : 7.35am
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು:

- ಗಣರಾಜ್ಯೋತ್ಸವದ ಮುನ್ನಾ ದಿನವಾದ ಇಂದು ದೇಶವನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ
- ನವದೆಹಲಿಯಲ್ಲಿಂದು ಇಂಡೋನೇಷ್ಯಾ ಅಧ್ಯಕ್ಷ ಪ್ರಬವೊ ಸುಬಿಯಾಂತೊ, ರಾಷ್ಟ್ರಪತಿ, ಪ್ರಧಾನಿ ಅವರೊಂದಿಗೆ ಸಮಾಲೋಚನೆ
- ದೇಶಾದ್ಯಂತ ಇಂದು ೧೫ನೇ ರಾಷ್ಟ್ರೀಯ ಮತದಾರರ ದಿನ ಆಚರಣೆ
- ದೇಶದ ಮೊದಲ ಸಹಕಾರಿ ವಿಶ್ವವಿದ್ಯಾಲಯ ಶೀಘ್ರದಲ್ಲೇ ಸ್ಥಾಪನೆ - ಕೇಂದ್ರ ಸಚಿವ ಅಮಿತ್ ಶಾ
- ಆಸ್ಟ್ರೇಲಿಯಾ ಓಪನ್ ಟೆನಿಸ್; ಮಹಿಳಾ ಸಿಂಗಲ್ಸ್ ಫೈನಲ್ಸ್‌ನಲ್ಲಿಂದು ಅರಿನಾ ಸಬಲೆಂಕಾ - ಮ್ಯಾಡಿಸನ್ ಕೀಸ್ ಹಣಾಹಣಿ

******

ಗಣರಾಜ್ಯೋತ್ಸವ ದಿನದ ಮುನ್ನಾ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಸಂಜೆ ೭ ಗಂಟೆಗೆ ಅವರು, ಭಾಷಣ ಮಾಡಲಿದ್ದು ಆಕಾಶವಾಣಿ ಹಾಗೂ ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಮೊದಲಿಗೆ ಹಿಂದಿ, ಆನಂತರ ಇಂಗ್ಲಿಷ್ ಅವತರಣಿಕೆ ಪ್ರಸಾರವಾಗಲಿದೆ. ಬಳಿಕ ಪ್ರಾದೇಶಿಕ ಭಾಷೆಗಳಲ್ಲೂ ರಾಷ್ಟ್ರಪತಿ ಭಾಷಣ ಮೂಡಿಬರಲಿದೆ.

******

ನವದೆಹಲಿಯಲ್ಲಿ ಇಂದು ಇಂಡೋನೇಷ್ಯಾ ಅಧ್ಯಕ್ಷ ಪ್ರಬವೊ ಸುಬಿಯಾಂತೊ, ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಲಿದ್ದಾರೆ. ಈ ವೇಳೆ, ಅವರು ದ್ವಿಪಕ್ಷೀಯ ಸಂಬಂಧಗಳ ಪರಿಶೀಲನೆ ಮತ್ತು ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಕುರಿತು ಸಮಾಲೋಚಿಸಲಿದ್ದಾರೆ. ನಾಲ್ಕು ದಿನಗಳ ಭಾರತ ಭೇಟಿಗಾಗಿ ಅಧ್ಯಕ್ಷ ಪ್ರಬವೊ ನಿನ್ನೆ ನವದೆಹಲಿಗೆ ಆಗಮಿಸಿದರು. ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವೆ ಪವಿತ್ರ ಮಾರ್ಗರೀಟಾ ನವದೆಹಲಿಯ ವಿಮಾನ ನಿಲ್ದಾಣದಲ್ಲಿ ಅಧ್ಯಕ್ಷರನ್ನು ಬರಮಾಡಿಕೊಂಡರು. ಬಳಿಕ ಇಂಡೋನೇಷ್ಯಾ ಅಧ್ಯಕ್ಷರು ಕೇಂದ್ರ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಡಾ. ಜೈಶಂಕರ್, ಇಂಡೋನೇಷ್ಯಾ ಅಧ್ಯಕ್ಷರು ಭಾರತದ ೭೬ನೇ ಗಣರಾಜ್ಯೋತ್ಸವ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುತ್ತಿರುವುದು ಉಭಯ ರಾಷ್ಟ್ರಗಳ ನಡುವಿನ ಬಾಂಧವ್ಯದ ಸಂಕೇತವಾಗಿದೆ ಎಂದು ಹೇಳಿದ್ದಾರೆ. ಕಳೆದ ಅಕ್ಟೋಬರ್‌ನಲ್ಲಿ ಇಂಡೋನೇಷ್ಯಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಭಾರತಕ್ಕೆ ಪ್ರಬವೊ ಅವರು ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.

******

ನವದೆಹಲಿಯಲ್ಲಿ ನಿನ್ನೆ ಈ ಬಾರಿಯ ಗಣರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಲಿರುವ ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂ ಸೇವಕರು, ಯುವ ವಿನಿಮಯ ಯೋಜನೆ ಕೆಡೆಟ್‌ಗಳು, ಸ್ತಬ್ಧಚಿತ್ರಗಳ ಕಲಾವಿದರು ಹಾಗೂ ಬುಡಕಟ್ಟು ಅತಿಥಿಗಳನ್ನು ಪ್ರಧಾನಿ ನರೇಂದ್ರ ಮೋದಿ ಭೇಟಿ ಮಾಡಿದರು. ದೆಹಲಿಯ ಲೋಕ ಕಲ್ಯಾಣದ ಮಾರ್ಗದಲ್ಲಿರುವ ಪ್ರಧಾನಮಂತ್ರಿಗಳ ನಿವಾಸದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ, ಸ್ತಬ್ಧಚಿತ್ರ ಕಲಾವಿದರು, ಎನ್‌ಸಿಸಿ ಕೆಡೆಟ್‌ಗಳೊಂದಿಗೆ ಸಂವಾದ ನಡೆಸಿದರು. ಈ ವೇಳೆ ವಿವಿಧ ರಾಜ್ಯಗಳ ಜನರೊಂದಿಗೆ ಸಂವಾದ ನಡೆಸುವ ಮೂಲಕ ಏಕ್ ಭಾರತ್ ಶ್ರೇಷ್ಠ ಭಾರತ್ ಪರಿಕಲ್ಪನೆಯನ್ನು ಬಲಗೊಳಿಸಲು ಕರೆ ನೀಡಿದ ಪ್ರಧಾನಿ, ರಾಷ್ಟ್ರೀಯ ಐಕ್ಯತೆ ಮತ್ತು ವಿವಿಧತೆಯ ಮಹತ್ವದ ಮೇಲೆ ಬೆಳಕು ಚೆಲ್ಲಿದರು.

ಜವಾಬ್ದಾರಿಯುತ ನಾಗರಿಕರಾಗಿ ತಮ್ಮ ಕರ್ತವ್ಯಗಳನ್ನು ಪಾಲಿಸುವುದು ವಿಕಸಿತ ಭಾರತದ ಗುರಿ ಸಾಕಾರಕ್ಕೆ ಪ್ರಮುಖವಾಗಿದೆ. ಇದೇ ವೇಳೆ ಪ್ರಧಾನಿ ಯುವಕರು 'ಮೈಭಾರತ್' ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು, ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು. ಸಂವಾದದಲ್ಲಿ ಪ್ರಧಾನಿ ಲಕ್‌ಪತಿ ದೀದಿ ಸೇರಿದಂತೆ ಕೇಂದ್ರ ಸರ್ಕಾರ ಕೈಗೊಂಡಿರುವ ಹಲವು ಪ್ರಮುಖ ಯೋಜನೆಗಳ ಕುರಿತು ಮಾಹಿತಿ ನೀಡಿದರು.

******

ದೇಶಾದ್ಯಂತ ಇಂದು ೧೫ನೇ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತಿದೆ. ಇದರ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯಲ್ಲಿ ನಡೆಯಲಿರುವ ಮುಖ್ಯ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಕೇಂದ್ರ ಕಾನೂನು ಹಾಗೂ ನ್ಯಾಯ ಸಚಿವ, ಅರ್ಜುನ್ ರಾಮ್ ಮೇಘವಾಲ್, ಮುಖ್ಯ ಚುನಾವಣಾ ಆಯುಕ್ತರು ಸೇರಿದಂತೆ ಇತರ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ನಿನ್ನೆ ಮುಕ್ತಾಯಗೊಂಡ ಚುನಾವಣಾ ಆಯೋಗ ಆಯೋಜಿಸಿದ್ದ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿದ್ದ ಚುನಾವಣಾ ನಿರ್ವಹಣಾ ಸಂಸ್ಥೆಗಳ ಮುಖ್ಯಸ್ಥರು ಹಾಗು ಪ್ರತಿನಿಧಿಗಳು ಸಹ ಇಂದಿನ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಸುಗಮ ಚುನಾವಣೆ ಖಚಿತ ಪಡಿಸಿಕೊಳ್ಳುವಲ್ಲಿ ಗಣನೀಯ ಕೊಡುಗೆ ನೀಡಿದ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ರಾಷ್ಟ್ರಪತಿಗಳು ಅತ್ಯುತ್ತಮ ಚುನಾವಣಾ ಅಭ್ಯಾಸ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

******

ಬಯೋಮೆಟ್ರಿಕ್ ದೃಢೀಕರಣವು ಒಂದು ಭರವಸೆಯ ನಾವೀನ್ಯತೆಯಾಗಿದ್ದು, ಇದು ನಕಲಿ ಮತ ಚಲಾವಣೆ ಮತ್ತು ಒಂದಕ್ಕಿಂತ ಹೆಚ್ಚಿನ ಬಾರಿ ಮತದಾನವನ್ನು ತಪ್ಪಿಸುವುದಲ್ಲದೆ, ಚಲಾಯಿಸಿದ ಮತಗಳು ಸರಿಯಾದ ಅಭ್ಯರ್ಥಿಗೆ ಸೇರಿದೆ ಎಂಬುದನ್ನು ಖಚಿತಪಡಿಸುತ್ತದೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಿನ್ನೆ ಭಾರತ ಚುನಾವಣಾ ಆಯೋಗ ಆಯೋಜಿಸಿದ್ದ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು.

******

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತ ಅಭೂತಪೂರ್ವ ಪ್ರಗತಿ ಸಾಧಿಸುತ್ತಿದ್ದು, ಈ ಪ್ರಗತಿಯಲ್ಲಿ ಉತ್ತರ ಪ್ರದೇಶ ವಿಶೇಷ ಪಾತ್ರವಹಿಸಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದ್ದಾರೆ. ಲಖನೌದಲ್ಲಿ ನಿನ್ನೆ ಉತ್ತರ ಪ್ರದೇಶ ಸಂಸ್ಥಾಪನಾ ದಿನದ ಮೂರು ದಿನಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ೮ ವರ್ಷಗಳಲ್ಲಿ ಉತ್ತರ ಪ್ರದೇಶ ಉತ್ತಮ ಪ್ರದೇಶವಾಗಿದೆ. ಈ ಸ್ಥಳದಲ್ಲಿ ಮಹಾಕುಂಭಮೇಳದಂತಹ ಅತಿದೊಡ್ಡ ಉತ್ಸವವನ್ನು ಅಚ್ಚುಕಟ್ಟಾಗಿ ಆಯೋಜಿಸಲಾಗಿರುವುದನ್ನು ಇಡೀ ಜಗತ್ತು ಅಚ್ಚರಿಯಿಂದ ನೋಡುತ್ತಿದೆ ಎಂದು ಹೇಳಿದರು.

****ಧ್ವನಿ**** ಉಪರಾಷ್ಟ್ರಪತಿ

******

ಬೆಂಗಳೂರು ಆಕಾಶವಾಣಿಯ ಮುಖ್ಯವಾಹಿನಿ ೬೧೨ ಕಿಲೋಹರ್ಟ್ಸ್ ಹಾಗೂ ೧೦೧.೩ ಎಫ್‌ಎಮ್‌ನಲ್ಲಿ ಮಹಾಕುಂಭಮೇಳದಲ್ಲಿ ಎಐ ಬಳಕೆ ಕುರಿತು ಸಂದರ್ಶನ, ಇಂದು ಬೆಳಗ್ಗೆ ೯ ಗಂಟೆ ೧೦ ನಿಮಿಷಕ್ಕೆ ಮೂಡಿಬರಲಿದೆ. ಸಂದರ್ಶನದಲ್ಲಿ ಮಹಾಕುಂಭಮೇಳಕ್ಕಾಗಿ ಎಐ ಮತ್ತು ಸೈಬರ್ ಭದ್ರತಾ ಸಲಹೆಗಾರ ಡಾ. ಉದಯ್ ಶಂಕರ್ ಪುರಾಣಿಕ ಅತಿಥಿಗಳಾಗಿ ಭಾಗವಹಿಸುತ್ತಿದ್ದಾರೆ.

******

ದೇಶದ ಮೊದಲ ಸಹಕಾರಿ ವಿಶ್ವವಿದ್ಯಾಲಯ ತ್ರಿಭುವನ ದಾಸ್ ಪಟೇಲ್ ಸಹಕಾರಿ ವಿಶ್ವವಿದ್ಯಾಲಯವನ್ನು ಶೀಘ್ರದಲ್ಲೇ ಸ್ಥಾಪಿಸಲಾಗುವುದು ಹಾಗೂ ಮುಂಬರುವ ಬಜೆಟ್‌ನಲ್ಲಿ ಈ ಕುರಿತು ಘೋಷಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಮಹಾರಾಷ್ಟ್ರದ ಮುಂಬೈನಲ್ಲಿ ನಡೆದ ಅಂತಾರಾಷ್ಟ್ರೀಯ ಸಹಕಾರಿ ವರ್ಷ ೨೦೨೫ರ ಉದ್ಘಾಟನಾ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಸಹಕಾರಿ ಸಂಘಗಳು ಶಿಸ್ತು ಮತ್ತು ವೃತ್ತಿಪರತೆಯನ್ನು ಕಾಪಾಡಿಕೊಳ್ಳುವ ಅಗತ್ಯವಿದೆ.

ಸಹಕಾರದಿಂದ ಸಮೃದ್ಧಿ ಸಾಧಿಸಲು ಈ ಕ್ಷೇತ್ರದ ಸಮಗ್ರ ಬೆಳವಣಿಗೆ ಪ್ರಮುಖವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಚಿವರು, ರಾಷ್ಟ್ರೀಯ ನಗರ ಸಹಕಾರಿ ಮತ್ತು ಅಭಿವೃದ್ಧಿ ಸಹಕಾರಿ ನಿಗಮ - ಎನ್‌ಯುಸಿಎಫ್‌ಡಿಸಿಯ ನೂತನ ಕಾರ್ಪೊರೇಟ್ ಕಚೇರಿಯನ್ನು ಉದ್ಘಾಟಿಸುವ ಜತೆಗೆ ೨೦೨೫ರ ಅಂತಾರಾಷ್ಟ್ರೀಯ ಸಹಕಾರ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು.

******

ಆದಾಯ ತೆರಿಗೆ ಕಾಯ್ದೆಯಡಿಯಲ್ಲಿ ಮೂಲದಲ್ಲಿ ಕಡಿತಗೊಳಿಸಿದ ತೆರಿಗೆ-ಟಿಡಿಎಸ್ ವ್ಯವಸ್ಥೆಯನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು-ಪಿಐಎಲ್ ಸುಪ್ರೀಂ ಕೋರ್ಟ್ ನಿನ್ನೆ ವಜಾಗೊಳಿಸಿದೆ. ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಸಂಜಯ್ ಕುಮಾರ್ ಅವರನ್ನೊಳಗೊಂಡ ನ್ಯಾಯಪೀಠವು, ಅರ್ಜಿದಾರರು ಹೈಕೋರ್ಟ್ ಸಂಪರ್ಕಿಸುವಂತೆ ಸಲಹೆ ನೀಡಿತು. ಟಿಡಿಎಸ್ ಕಾರ್ಯವಿಧಾನವು ಅನಿಯಂತ್ರಿತ. ಸಮಾನತೆಯ ಹಕ್ಕು ಸೇರಿದಂತೆ ಹಲವಾರು ಮೂಲಭೂತ ಹಕ್ಕುಗಳನ್ನು ಇದು ಉಲ್ಲಂಘಿಸುತ್ತದೆ ಎಂದು ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಉಲ್ಲೇಖಿಸಿದ್ದರು.

******

೨೦೨೪ರ ವಕ್ಫ್ ತಿದ್ದುಪಡಿ ವಿಧೇಯಕ ಕುರಿತಾದ ಜಂಟಿ ಸಂಸದೀಯ ಸಮಿತಿಯ ನಿನ್ನೆ ನಡೆದ ಸಭೆಯಿಂದ ವಿರೋಧ ಪಕ್ಷದ ಹತ್ತು ಸಂಸದರನ್ನು ಅಮಾನತುಗೊಳಿಸಲಾಗಿದೆ. ಅಮಾನತುಗೊಂಡವರಲ್ಲಿ ಟಿಎಂಸಿಯ ಕಲ್ಯಾಣ್ ಬ್ಯಾನರ್ಜಿ, ಡಿಎಂಕೆಯ ಎ.ರಾಜಾ, ಕಾಂಗ್ರೆಸ್ ಸಂಸದರಾದ ನಾಸಿರ್ ಹುಸೇನ್ ಮತ್ತು ಇಮ್ರಾನ್ ಮಸೂದ್ ಹಾಗೂ ಸಮಾಜವಾದಿ ಪಕ್ಷದ ಮೊಹಿಬುಲ್ಲಾ ಸೇರಿದ್ದಾರೆ ಎಂದು ಮೂಲಗಳು ತಿಳಿಸಿವೆ.

******

ಮೆಲ್ಬೋರ್ನ್‌ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯನ್ ಓಪನ್ ಗ್ರ್ಯಾನ್‌ಸ್ಲ್ಯಾಮ್ ಟೆನಿಸ್ ಟೂರ್ನಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿಂದು ವಿಶ್ವ ಅಗ್ರ ಶ್ರೇಯಾಂಕಿತ, ಬೆಲಾರಸ್‌ನ ಅರಿನಾ ಸಬಲೆಂಕಾ, ಅಮೆರಿಕದ ಮ್ಯಾಡಿಸನ್ ಕೀಸ್ ಅವರನ್ನು ಎದುರಿಸಲಿದ್ದಾರೆ.

ಮತ್ತೊಂದೆಡೆ ಪುರುಷರ ಡಬಲ್ಸ್ ವಿಭಾಗದ ಫೈನಲ್‌ನಲ್ಲಿಂದು ಬ್ರಿಟನ್‌ನ ಹೆನ್ರಿ ಪಟ್ಟೆನ್ ಮತ್ತು ಫಿನ್‌ಲ್ಯಾಂಡ್ ಹ್ಯಾರಿ ಹೆಲಿಯೋವಾರ್ ಜೋಡಿ, ಇಟಲಿಯ ಜೋಡಿಯಾದ ಸಿಮಾನ್ ಬೊಲೆಲ್ಲಿ ಮತ್ತು ಆಂಡ್ರಿಯ ವವಸ್ಸರಿ ಅವರನ್ನು ಎದುರಿಸಲಿದೆ.

******

ನವದೆಹಲಿಯಲ್ಲಿ ನಡೆದ ಖೋ ಖೋ ವಿಶ್ವಕಪ್‌ನಲ್ಲಿ ಐತಿಹಾಸಿಕ ಗೆಲುವು ಸಾಧಿಸಿದ ಭಾರತೀಯ ಪುರುಷ ಮತ್ತು ಮಹಿಳಾ ಖೋ ಖೋ ತಂಡಗಳನ್ನು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ಖಡ್ಸೆ ನಿನ್ನೆ ಸನ್ಮಾನಿಸಿದರು. ಇತ್ತೀಚೆಗೆ ನವದೆಹಲಿಯಲ್ಲಿ ನಡೆದ ಮೊದಲ ಖೋ ಖೋ ವಿಶ್ವಕಪ್ ಅನ್ನು ಎರಡೂ ತಂಡಗಳು ಗೆದ್ದಿದ್ದು, ಇದು ದೇಶದ ಸಾಂಪ್ರದಾಯಿಕ ಆಟದ ಗೆಲುವು ಎಂದು ಸಚಿವೆ ರಕ್ಷಾ ಖಡ್ಸೆ ಹೇಳಿದರು.ಮುಂದಿನ ದಿನಗಳಲ್ಲಿ ಒಲಿಂಪಿಕ್ ಕ್ರೀಡಾಕೂಟದಲ್ಲಿ ಖೋ ಖೋ ತನ್ನ ಸ್ಥಾನವನ್ನು ಕಂಡುಕೊಳ್ಳಲಿದೆ ಎಂದು ಇದೇ ವೇಳೆ ಅವರು ವಿಶ್ವಾಸ ವ್ಯಕ್ತಪಡಿಸಿದರು.

******